**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.**

ಸಿಸಿ ನಂಬರ್ **995/2023**

| | | | |
|---|---|---|---|
| ಸಾಕ್ಷಿಯ ಹೆಸರು | : ಬಸನಗೌಡ | | ಸಿ.ಡಬ್ಲ್ಯು 11 |
| ತಂದೆಯ ಹೆಸರು | : ಶಿವಶಂಕರ್ | | ಪಿ.ಡಬ್ಲ್ಯು 3 |
| ವಯಸ್ಸು | : 34 ವರ್ಷ | | |
| ಉದ್ಯೋಗ | : ಪಿ.ಎಸ್.ಐ | | |
| ವಾಸ ಸ್ಥಳ | : ತರೀಕೆರೆ | | |

ದಿನಾಂಕಃ**03-12-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ನಾನು 2022 ನೇ ಸಾಲಿನಿಂದ ಈ ದಿನದ ವರೆಗೆ ತರೀಕೆರೆಯಲ್ಲಿ ಪಿ.ಎಸ್.ಐ ಎಂದು ಕೆಲಸ ಮಾಡುತ್ತಿದ್ದೇನೆ.

ಈ ಪ್ರಕರಣದಲ್ಲಿ ದಿನಾಂಕ 09-06-2023 ರಂದು ಈ ಪ್ರಕರಣದ ಕಡತವನ್ನು ಚಾಸಾ-10 ರವರಿಂದ ಪಡೆದುಕೊಂಡು ಪರಿಶೀಲನೆ ಮಾಡಿದ್ದೇನೆ. ಅದೇ ದಿನ ಚಾಸಾ-7 ರವರಿಂದ ರಾಸಾಯನಿಕ ಪರೀಕ್ಷಾ ವರದಿಯನ್ನು ಮತ್ತು ಮುದ್ದೆಮಾಲನ್ನು ಸ್ವೀಕರಿಸಿಕೊಂಡಿದ್ದೇನೆ. ಅದುವರೆಗಿನ ತನಿಖೆಯಿಂದ ಆರೋಪ ಸಾಬೀತು ಆದ ಕಾರಣ ಅಂತಿಮ ವರದಿ ಸಲ್ಲಿಸಿದ್ದೇನೆ. ಎಫ್.ಎಸ್.ಎಲ್ ವರದಿಯನ್ನು ನಿ.ಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-5(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ

ನಾನು ಅಮಾನತ್ತುಪಡಿಸಿಕೊಂಡ ಮುದ್ದೆಮಾಲನ್ನು ತಜ್ಞರ ಪರೀಕ್ಷೆಗೆ ಕಳುಹಿಸಿಲ್ಲ ಮತ್ತು ವರದಿಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರು ನೀಡಿದ ಸುಳ್ಳು ದೂರಿಗೆ ಪೂರಕವಾಗಿ ಅಂತಿಮ ವರದಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ **:** ಇಲ್ಲಃ

**(**ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.**)**

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.